ಓ:ಎಸ್:ನಂ.*110/2019*

ಪಿ.ಡಬ್ಲ್ಯೂ- *1*

***ದಿ: 14-12-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.***
***ಮುಖ್ಯ ವಿಚಾರಣೆ: ವಾದಿ ಪರ ಶ್ರೀ ಎಸ್ ಪಿ ವಕೀಲರಿಂದ.***

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನ್ನ ಸ್ವಂತ ಮಾಹಿತಿ ಮೇರೆಗೆ ಹೇಳಿ ಬರೆಸಿದ್ದು ಅವು ಸತ್ಯವಾಗಿರುತ್ತವೆ. ಪ್ರಮಾಣಪತ್ರದಲ್ಲಿನ ಸಂಗತಿಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನ್ಯಾಯಾಲಯಕ್ಕೆ ನಮ್ಮ ಕುಟುಂಬದ ನೋಟರೀಕೃತ ವಂಶವೃಕ್ಷವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*1* ಎಂದು, ಮೂರು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-*2* ರಿಂದ ನಿಪಿ-*4* ಎಂದು, ದಿ: *26-10-2018* ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*5* ಎಂದು, ದಿ: *21-08-2015* ರ ನೊಂದಾಯಿತ ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*6* ಎಂದು, ದಿ: *21-03-2016* ರ ಒಂದು ನೋಂದಾಯಿತ ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*7* ಎಂದು, ದಿ: *08-09-2016* ರ ಒಂದು ನೋಂದಾಯಿತ ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*8* ಎಂದು, ದಿ: *22-07-2017* ರ ಒಂದು ದಾನ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*9* ಎಂದು, *7* ಕೈಬರಹದ ಪಹಣಿ ಪತ್ರಿಕೆಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-*10* ರಿಂದ ನಿಪಿ-*16* ಎಂದು, ನಾಲ್ಕು ಮ್ಯುಟೇಷನ್ ಎಕ್ಸಟ್ರಾಕ್ಟ್ ನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-*17* ರಿಂದ ನಿಪಿ-*20* ಎಂದು, ಇಂಡೇಕ್ಸ್ ಆಫ್ ಲ್ಯಾಂಡ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*21* ಎಂದು, ರೆಕಾರ್ಡ ಆಫ್ ರೈಟ್ಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*22* ಎಂದು, ಇಂಡೇಕ್ಸ್ ಆಫ್ ಲ್ಯಾಂಡ್ ನ

ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*23* ಎಂದು , ರೆಕಾರ್ಡ ಆಫ್ ರೈಟ್ಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*24* ಎಂದು ಗುರುತಿಸಲಾಯಿತು.

***ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲ*ರಿಂದಃ**

ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯ್ತು.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

*ಓ. ಕೇ. ಸ. ಇ. ಎ. ಒ.*

Sd/-

*ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು*

***ಪ್ರ.ದ.ನ್ಯಾ.ದಂ. ರವರು, ತರೀಕೆರೆ.***